<u>ಪ್ರಧಾನ ನಗರ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ನಗರ (ಸಿಸಿಹೆಚ್ -1) ರವರ ನ್ಯಾಯಾಂಗಣದಲ್ಲಿ</u>

<u>ಎಸ್.ಸಿ. ಸಂಖ್ಯೆ: 497/2021</u>

ಚಾ.ಸಾ- 4 ಪ್ರಾ.ಸಾ- 3

ದಿ: 22.05.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

| | |
|---|---|
| ಹೆಸರು | ಚೇತನ್ |
| ತಂದೆ ಹೆಸರು | ಬಿ.ಜಿ.ಕೃಷ್ಣ |
| ವಯಸ್ಸು | 25 ವರ್ಷ |
| ವೃತ್ತಿ | ಖಾಸಗಿ ಉದ್ಯೋಗಿ |
| ವಿಳಾಸ | ಯಲಹಂಕ, ಬೆಂಗಳೂರು |

<u>ಮುಖ್ಯವಿಚಾರಣೆ: ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದ:</u>

ನನಗೆ ಚಾ.ಸಾ-30 - ಹರೀಶ್ ಅಥವಾ ಈ ಪ್ರಕರಣದ ಆರೋಪಿಗಳ ಪರಿಚಯ ಇಲ್ಲ. ನಾನು ಹರೀಶ್ ರವರ ಮೇಲೆ ನಡೆದ ಹಲ್ಲೆಯನ್ನು ನೋಡಿರುವುದಾಗಿ ಪೋಲೀಸರ ಮುಂದೆ ಹೇಳಿಕೆಯನ್ನು ನೀಡಿರಲಿಲ್ಲ.

ಈ ಹಂತದಲ್ಲಿ ಮಾನ್ಯ ಮುಖ್ಯ ಸರ್ಕಾರಿ ಅಭಿಯೋಜಕರ ಕೋರಿಕೆಯ ಮೇರೆಗೆ ಸಾಕ್ಷಿಯ ಹೇಳಿಕೆ ಹಾಗು ಕಡತದಲ್ಲಿನ ದಾಖಲೆಗಳನ್ನು ಪರಿಗಣಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ.

<u>ಪಾಟಿಸವಾಲು: ಮಾನ್ಯ ಅಭಿಯೋಜಕರಿಂದ:</u>

2. ದಿ: 14.1.2021 ರಂದು ರಾತ್ರಿ ಸುಮಾರು 10.30 ರ ವೇಳೆಗೆ ನಾನು ನನ್ನ

ಮನೆಯಲ್ಲಿ ಮಲಗಿದ್ದಾಗ ನಮ್ಮ ಮನೆಯ ಪಕ್ಕದಲ್ಲಿ ಯಾರೋ ಜೋರಾಗಿ ಕೂಗಾಡುತ್ತಿದ್ದ ಶಬ್ದ ಕೇಳಿ ನಾನು ಮತ್ತು ನನ್ನ ಮನೆಯವರು ಹೊರಗೆ ಬಂದು ನೋಡಿದಾಗ ನಮ್ಮ ಮನೆಯ ಪಕ್ಕದ ಖಾಲಿ ಸೈಟ್ ನಲ್ಲಿ 5 ಜನ ಅಪರಿಚಿತರು ಗುಂಪು ಕಟ್ಟಿಕೊಂಡು ಒಬ್ಬ ಅಪರಿಚಿತ ವ್ಯಕ್ತಿಯನ್ನು ಕೆಳಗೆ ಬೀಳಿಸಿಕೊಂಡು ಲಾಂಗ್, ಚಾಕುಗಳನ್ನು ಹಿಡಿದುಕೊಂಡು ಹೊಡೆಯುತ್ತಿದ್ದರು ಎಂದರೆ ನನಗೆ ಗೊತ್ತಿಲ್ಲ. ಆಗ ನಾವು ನಮ್ಮ ಲೇಔಟ್ ನ ನಂದೀಶಪ್ಪನವರಿಗೆ  ಫೋನ್ ಮಾಡಿದ್ದು, ಅದರಂತೆ ನಂದೀಶಪ್ಪ ಮತ್ತು ಮಹೇಶ್ ರವರು ಅಲ್ಲಿಗೆ ಬಂದಿದ್ದರು ಎಂದರೆ ಸರಿಯಲ್ಲ. ನಮ್ಮನ್ನು ನೋಡಿ ಹಲ್ಲೆ ಮಾಡುತ್ತಿದ್ದ ವ್ಯಕ್ತಿಗಳು ಅಲ್ಲಿಂದ ಓಡಿಹೋಗಿದ್ದರು ಹಾಗು ಕೆಳಗೆ ಬಿದ್ದಿದ್ದ ವ್ಯಕ್ತಿಯ ತಲೆಗೆ , ಕುತ್ತಿಗೆಗೆ ಮತ್ತು ಮುಖಕ್ಕೆ ಗಾಯಗಳಾಗಿ ರಕ್ತ ಬರುತ್ತಿತ್ತು ಎಂದರೆ ನನಗೆ ಗೊತ್ತಿಲ್ಲ. ಮಹೇಶ್ ರವರು ಫೋನ್ ಮಾಡಿದಂತೆ ಪೋಲೀಸರು ಸ್ಥಳಕ್ಕೆ ಬಂದು ಆ್ಯಂಬುಲೆನ್ಸ್ ತರಿಸಿ ಗಾಯಗೊಂಡ ವ್ಯಕ್ತಿಯನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು ಎಂದರೆ ನನಗೆ ಗೊತ್ತಿಲ್ಲ.

3. ದಿಃ 17.1.2021 ರಂದು ಪೋಲೀಸರು ನನ್ನನ್ನು ಠಾಣೆಗೆ ಕರೆಸಿದ್ದ ಮೇರೆಗೆ ನಾನು ಅಲ್ಲಿಗೆ ಹೋದಾಗ ನನಗೆ ಒಂದು ಫೋಟೋವನ್ನು ತೋರಿಸಿದ್ದರು ಹಾಗು ಅದರಂತೆ ನಾನು ಸದರಿ ಫೋಟೋದಲ್ಲಿದ್ದ ವ್ಯಕ್ತಿಯನ್ನು ಹರೀಶ್ ಅಲಿಯಾಸ್ ತುರೆ ಎಂದು ಗುರುತಿಸಿರುತ್ತೇನೆ ಎಂದರೆ ಸರಿಯಲ್ಲ. ಅಲ್ಲದೆ ಈ ಆರೋಪಿಗಳು ಹಳೆಯ ದ್ವೇಷದಿಂದ ಸದರಿ ಹರೀಶ್ ಅಲಿಯಾಸ್ ತುರೆ ರವರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿರುವ ವಿಚಾರ ನನಗೆ ತಿಳಿದಿರುವುದಾಗಿ ಹೇಳಿದ್ದೆ ಎಂದರೆ ಸರಿಯಲ್ಲ. ಹಾಗೆಯೆ ನಾನು ಸದರಿ ದಿನದಂದು ಠಾಣೆಯಲ್ಲಿದ್ದ 1 ರಿಂದ 3 ನೇ ಆರೋಪಿಗಳನ್ನು ನೋಡಿ ಸದರಿ ವ್ಯಕ್ತಿಗಳು ಹರೀಶ್ ರವರ ಮೇಲೆ ಹಲ್ಲೆ ಮಾಡಿದ ವ್ಯಕ್ತಿಗಳು ಎಂದು ಗುರುತಿಸಿರುತ್ತೇನೆ ಎಂದರೆ ಸರಿಯಲ್ಲ. ಸದರಿ ನನ್ನ ಹೇಳಿಕೆಯಲ್ಲಿ " ದಿಃ 14.1.2021 ರಂದು ... .... ….  ಗುರುತಿಸುತ್ತೇನೆ."  ಎಂದು ಹೇಳಿರುತ್ತೇನೆ ಎಂದರೆ ಸರಿಯಲ್ಲ. ಈ ಭಾಗದ ಹೇಳಿಕೆಯನ್ನು ನಿ.ಪಿ-5 ಎಂದು ಗುರುತಿಸಲಾಯಿತು.

4. ನನಗೆ ಈ ಪ್ರಕರಣದ ಘಟನೆ ಬಗ್ಗೆ ಹಾಗು ನಿ.ಪಿ-5 ರಂತೆ ನೀಡಿರುವ ಹೇಳಿಕೆ ಬಗ್ಗೆ ಮಾಹಿತಿ ಇದ್ದರೂ ಈಗ ನಾನು ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿದಿರುತ್ತೇನೆ ಎಂದರೆ ಸರಿಯಲ್ಲ.

ಆರೋಪಿಗಳ ಪರ ವಕೀಲರು ತಮ್ಮ ಪರ ಪಾಟಿಸವಾಲು ಇಲ್ಲ ಎಂದು ನುಡಿದಿರುತ್ತಾರೆ.

ಮರುವಿಚಾರಣೆಃ ಇಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಕೇ. ಹೇ. ಸರಿ ಇದೆ

(ಮುರಲಿಧರ ಪೈ ಬಿ.)
ಪ್ರಧಾನ ನಗರ ಮತ್ತು ಸತ್ರ ನ್ಯಾಯಾಧೀಶರು,
(ಸಿಸಿಹೆಚ್ - 01) ಬೆಂಗಳೂರು.